ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್ ಜಡ್ಜ್‌ರವರ ಕೋರ್ಟ್‌ನಲ್ಲಿ—

1884ನೇ ಇಸವಿ ಅರ್ಜಿ ನಂಬರ್ 85.

ಮೃತಪಟ್ಟ ಪಟೇಲ್ ಚಿಕ್ಕರಂಗೇಗೌಡರ ಆಸ್ತಿ ವಿಷಯದಲ್ಲಿ—

ಅರ್ಜಿದಾರು ರಂಗೇಗೌಡ ಮೈನರ್ ತಾಯಿ ಬೋರಮ್ಮನು, ಮೃತಪಟ್ಟ ಸದರೀ ಚಿಕ್ಕರಂಗೇಗೌಡರಿಗೆ ಮಗನು ಹೆಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಕುಣಿಗಲ್ ತಾಲ್ಲೂಕು ಹುತ್ರಿದುರ್ಗ ಸಂ|| ಭೀಮನಪುರ ಸ್ಥಳದ ಮೈನರ್ ರಂಗೇಗೌಡನ ತಾಯಿ ಬೋರಮ್ಮನು, ಡಿಟೋ ಗ್ರಾಮ ವಾಸಸ್ಥರಾಗಿ ಮೃತಪಟ್ಟ ಚಿಕ್ಕರಂಗೇಗೌಡರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬ್ಯಗ್ಯೆ ಈ ಕೋರ್ಟಿಗೆ ಖಾಮಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಬೋರಮ್ಮನ ಅರ್ಜೀಯನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 31ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತ್. ಆಕಾಲದಲ್ಲಿ ಸದರೀ ಮೃತಪಟ್ಟ ಚಿಕ್ಕರಂಗೇಗೌಡರ ಆಸ್ತಿಗೆ ಹಕ್ಕುದಾರರಾದ ವಿಸಿಸ್ಟರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1884ನೇ ಇಸವಿ ಜುಲೈ ತಿಂಗಳು 3ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿನಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಸಿ. ಕ್ಯೇಸ್,
ಸಬ ಜಡ್ಜ್.

ತುಮಕೂರು ಡಿಸ್ಟ್ರಿಕ್ಟ್.

ತಾರೀಖು 30ನೇ ಜೂ 1884.

ಇದರಿಂದ ತಿಳಿಯಪಡಿಸುವದೇನಂದರೆ, ತುರ್ವೆಕೆರೆ ಸಬ್ ರಿಜಿಸ್ಟ್ರಿ ಆಫೀಸಿನಲ್ಲಿ ಬೇವಾರಸಾಗಿ ಯಿರತಕ್ಕ ಈ ಕೆಳಗೆ ವಿವರಿಸೋಣಾದ ದಸ್ತಾವೇಜನ್ನ ಹಾಜರ್ ಮಾಡಿದವರೆ ಆಗಲಿ ಅಥವಾ ವಾಪಸ್ ಪಡಿಯಲಿಕ್ಕೆ ಅವರಿಂದ ಕ್ರಮವಾದ ಅಧಿಕಾರ ಹೊಂದಿದವರಾಯಾ ಹಕ್ಕುದಾರರೆ ಆಗಲಿ ಈ ನೋಟೀಸ್ ತಾರೀಖು ಲಾಗಾಯತ್ತು ಎಂದು ತಿಂಗಳ ಒಳಗಾಗಿ ಡಿಟೋ ಸಬ್ ರಿಜಿಸ್ಟ್ರಾರವರ ಹತ್ತ ಜರಾಗಿ ಅದನ್ನು ವಾಪಸ್ ತೆಗದುಕೊಳ್ಳಬೇಕು, ಇದಕ್ಕೆ ತಪ್ಪಿದರೆ ಸ್ಯ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷ್ ಆಕ್ಟ್ ಸೆಕ್ಷನ್ ಅನುಸರಿಸಿ ಅದು ನಾಶಪಡಿಸಲ್ಪಡುವದು.

ದಸ್ತಾವೇಜು ನಂಬರ್.	ದಸ್ತಾವೇಜಿನ ತಾರೀಖು.	ರಿಜಿಸ್ಟರ್ ಬುಕ್‌ನಲ್ಲಿ ಬರೆದಿರುವ ತಾರೀಖು.	ರಿಜಿಸ್ಟರ್ ಆದ ತಾರೀಖು.	ದಸ್ತಾವೇಜು ಬರದುಕೊಟ್ಟವರ ಹೆಸರು ಮತ್ತು ಸ್ಥಳ.	ದಸ್ತಾವೇಜು ಬರಿಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ದಸ್ತಾವೆಜಿನ ಸ್ವಭಾವ ಕಿಮ್ಮತ್ತು.
31 1882—83	16—4—82	19—6—82	26—6—82	ವಡ್ಡರ ಮಲ್ಲೇನಹಳ್ಳಿ ಗ್ರಾಮದ ಬೋರಣ್ಣನ ಮಗ ಸುಬ್ಬ	ವಡ್ಡರಹಳ್ಳಿ ಗ್ರಾಮದ ಬಸವಲಿಂಗಯ್ಯ	50 ರೂಪಾಯಿಗೆ ವಡ್ಡರಹಳ್ಳಿಯಲ್ಲಿ ತನ್ನ ಹೆಸರಿಗೆ ಇರತಕ್ಕ ಕೆಲವು ಜಮೀನುಗಳು ಖರೀದಿಗೆ ಕೊಟ್ಟಿರುವದಾಗಿ ವಗೈರೆ.

ತಾರೀಖು 17ನೇ ಜೂ 1884.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ತಿಪಟೂರು ಸಬ್ ರಿಜಿಸ್ಟ್ರೀ ಆಫೀಸ್‌ನಲ್ಲಿ ಬೇವಾರಸಾಗಿಯಿರತಕ್ಕ ಈ ಕೆಳಗೆ ವಿವರಿಸೋಣಾದ ದಸ್ತೈವಜನ್ನು ಹಾಜರ್ ಮಾಡಿದವನೇ ಯಾಗಲಿ ಅಥವಾ ವಾಪಸ್ ಪಡಿಯಲಿಕ್ಕೆ ಅವನಿಂದ ಕ್ರಮವಾದ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರನೇ ಯಾಗಲೀ ಈ ನೋಟೀಸ್ ತಾರೀಖು ಲಗಾಯಿತು ಎಂದು ತಿಂಗಳ ಒಳಗಾಗಿ ಡಿಟೋ ಸಬ್ ರಿಜಿಸ್ಟ್ರಾರ್ ರೂಬರೂಬು ಹಾಜರಾಗಿ ಅದನ್ನು ವಾಪಸು ತೆಗದುಕೊಳ್ಳಬೇಕು, ಇದಕ್ಕೆ ತಪ್ಪಿದರೆ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷ್ ಆಕ್ಟ್ 85ನೇ ಸೆಕ್ಷನ್ ಅನುಸರಿಸಿ ಅದು ನಾಶಪಡಿಸಲ್ಪಡುವದು.

ದಸ್ತಾವೇಜು ನಂಬರ್	ದಸ್ತಾವೇಜು ತಾರೀಖು	ರಿಜಿಸ್ಟ್ರಿಗೆ ಹಾಜರಾದ ತಾರೀಖು.	ದಸ್ತಾವೇಜು ರಿಜಿಸ್ಟ್ರು ಮಾಡಿಸಿದ ತಾರೀಖು	ದಸ್ತಾವೇಜು ಬರದು ಕೊಟ್ಟವರ ಹೆಸರು ಮತ್ತು ವಾಸಸ್ಥಳ	ದಸ್ತಾವೇಜು ಬರಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
60 1882—83	1—6—82	5—6—82	5—6—82	ಲಿಂಗಪಹಳ್ಳಿ ಮೇಲಣಮನೆ ಲಿಂಗಂಣ.	ಹೊನ್ನವಳ್ಳಿ ತಾಲ್ಲೂಕು ಗುರುಗದಹಳ್ಳಿ ಮಲ್ಲಪಟ್ಟಿ.	45 ರೂಪಾಯಿಗೆ ಲಿಂಗದಹಳ್ಳಿಗಾಮದಲ್ಲಿ ಇರುವ ಸರ್ವೆ 49ನೇ ನಂಬರ್ ಬಾಗಾಯತು ಜಮೀನು ಪೈಕೀ ತನ್ನ ಹಿಸ್ಸೆ ಬಾಬತು ಜಮೀನು ಕ್ರಯಕ್ಕೆ ಕೊಟ್ಟರುವದಾಗಿ ವಗೈರೆ.

ಪಿ. ಎ. ಕೃಷ್ಣಮೂರ್ತಿ,
ರಿಜಿಸ್ಟ್ರಾರ್.

ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜ್‌ರ್ಯವರ ಕೋರ್ಟಿನಲ್ಲಿ.

1884ನೇ ಇಸವಿ ಅರ್ಜೀ ನಂಬರ್ 162.

ಮೃತಪಟ್ಟ ದೊಡ್ಡ ತಮ್ಮಯ್ಯ ವುರಫ್ ಚಲುವರಾಯಪ್ಪನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಚಂದ್ರಯ್ಯ. ಮೃತಪಟ್ಟ ಸದರೀ ದೊಡ್ಡ ತಮ್ಮಯ್ಯ ವುರಫ್ ಚಲುವರಾಯಪ್ಪನಿಗೆ ತಮ್ಮ ಆಗಬೇಕೆಂಬ ಹಕ್ಕುದಾರೀ ಮೇಲೆ ಚನ್ನರಾಯಪಟ್ಟಣ ತಾಲ್ಲೂಕು ಶ್ರವಣಬೆಳಗುಳ ಸ್ಥಳದ ಸದರೀ ಚಂದ್ರಯ್ಯನು, ಸದರೀ ವಾಸಸ್ಥನಾಗಿ ಮೃತಪಟ್ಟ ದೊಡ್ಡ ತಮ್ಮಯ್ಯ ವುರಫ್ ಚಲುವರಾಯಪ್ಪನ ಜಿಂದಗಿ ಬಗ್ಯಾಗಿ ಬರತಕ್ಕ 950 ರೂಪಾಯಿಗಳ ಸಾಲಗಳನ್ನು ವಸೂಲ್‌ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಚಂದ್ರಯ್ಯನ ಅರ್ಜೀದಸ್ತನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 29ರಲ್ಲು ಮೈಸೂರು ವೊಕ್ಕ್ಯಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದೊಡ್ಡ ತಮ್ಮಯ್ಯ ವುರಫ್ ಚಲುವರಾಯಪ್ಪನ ಆಸ್ತಿಗೆ ಹಕ್ಕುದಾರರಾದ ವಿಶೆಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಅರ್ಜೀ ನಂಬರ್ 167.

ಮೃತಪಟ್ಟ ಕಿದ್ದನಮಗ ಲಿಂಗನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಲಿಂಗನು, ಮೃತಪಟ್ಟ ಸದರೀ ಕಿದ್ದನಮಗ ಲಿಂಗನಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ನಂಜನಗೂಡು ತಾಲ್ಲೂಕು ನಗರ್ಲೆ ಸ್ಥಳದ ಲ್ಲಿಂಗನು ಸದರೀ ವಾಸಸ್ಥನಾಗಿ ಮೃತಪಟ್ಟ ಕಿದ್ದನಮಗ ಲಿಂಗನ ಜಿಂದಗಿ ಬಗ್ಯಾಗಿ ಬರತಕ್ಕ 50 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಲಿಂಗನ ಅರ್ಜೀಯನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 29ರಲ್ಲು ಮೈಸೂರು ವೊಕ್ಕ್ಯಾಂ ಈ ಕೋರ್ಟು ರೂಬರೂ ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕಿದ್ದನ ಮಗ ಲಿಂಗನ ಆಸ್ತಿಗೆ ಹಕ್ಕುದಾರರಾದ ವಿಶೆಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿದೆ.

ಸ್ಯ 1884ನೇ ಇಸವಿ ಅರ್ಜೀ ನಂಬರ್ 172.

ಮೃತಪಟ್ಟ ಕುಳ್ಳಮಾದಯ್ಯನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಗುರುನಂಜಯ್ಯ ಮೈನರ್ ಗಾರ್ಡಿಯರ್ ಮತ್ತು ತಾಯಿ ಮಾದಮ್ಮ. ಮೃತಪಟ್ಟ ಸದರೀ ಕುಳ್ಳಮಾದಯ್ಯನಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಯಳಂದೂರು ತಾಲ್ಲೂಕು ಜೋಡಿ ಅಂಬಳೆ ಸ್ಥಳದ ಸದರೀ ಅರ್ಜೀದಾರನು ಸದರೀ ವಾಸಸ್ಥನಾಗಿ ಮೃತ